Received on
28/1/2021
WUP.

ಕರ್ನಾಟಕ ಸರ್ಕಾರ

**ಕಾಲೇಜು ಶಿಕ್ಷಣ ಇಲಾಖೆ**

# "ಕನ್ನಡ ಕಾಯಕ ವರ್ಷ ೨೦೨೦-೨೧"

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಶೇಷಾದ್ರಿ ರಸ್ತೆ, ಬೆಂಗಳೂರು–560001.

ಸಂಖ್ಯೆ: ಕಾಶಿಇ/ಶೈವಿ/06/ಸುತ್ತೋಲೆ/2020–21

ದಿನಾಂಕ: 25.01.2021

## ಸುತ್ತೋಲೆ

ವಿಷಯ: ಕರ್ನಾಟಕ ರಾಜ್ಯ ವಿಜ್ಞಾನ ಪರಿಷತ್ತು ಆಯೋಜಿಸುತ್ತಿರುವ 2020–21ನೇ ಸಾಲಿನ "ರಾಜ್ಯ ಮಟ್ಟದ ವಿಜ್ಞಾನ ವಸ್ತುಪ್ರದರ್ಶನ ಸ್ಪರ್ಧೆ" ಯಲ್ಲಿ ಪದವಿ ವಿಜ್ಞಾನ ವಿದ್ಯಾರ್ಥಿಗಳು ಭಾಗವಹಿಸುವ ಬಗ್ಗೆ.

ಉಲ್ಲೇಖ: ಅಧ್ಯಕ್ಷರು, ಕರ್ನಾಟಕ ರಾಜ್ಯ ವಿಜ್ಞಾನ ಪರಿಷತ್ತು, ಬೆಂಗಳೂರು, ರವರ ಪತ್ರ ಸಂಖ್ಯೆ:6.5.2/Ex/2020-21/559 dt: 21.01.2021.

* * * * * *

ವಿದ್ಯಾರ್ಥಿಗಳಲ್ಲಿ ಸೃಜನಶೀಲತೆ, ಕ್ರಿಯಾಶೀಲತೆ ಹಾಗೂ ವೈಜ್ಞಾನಿಕ ಮನೋಭಾವವನ್ನು ಬೆಳೆಸುವ ಉದ್ದೇಶದಿಂದ ರಾಜ್ಯದ ಪದವಿ ಕಾಲೇಜುಗಳ ವಿಜ್ಞಾನ ವಿದ್ಯಾರ್ಥಿಗಳಿಗೆ ಕರ್ನಾಟಕ ರಾಜ್ಯ ವಿಜ್ಞಾನ ಪರಿಷತ್ತು 2020–21ನೇ ಸಾಲಿನ **"ರಾಜ್ಯಮಟ್ಟದ ವಿಜ್ಞಾನ ವಸ್ತು ಪ್ರದರ್ಶನ ಸ್ಪರ್ಧೆ"** ಯನ್ನು ಆಯೋಜಿಸಿದೆ. ಸದರಿ ವಿಜ್ಞಾನ ವಸ್ತುಪ್ರದರ್ಶನ ಸ್ಪರ್ಧೆಯ ಕುರಿತ ಕರಪತ್ರವನ್ನು ಈ ಸುತ್ತೋಲೆಯೊಂದಿಗೆ ಲಗತ್ತಿಸಿದ್ದು, ಇದನ್ನು ಕಾಲೇಜಿನ ಪ್ರಕಟಣಾ ಫಲಕದಲ್ಲಿ ಪ್ರದರ್ಶಿಸಿ ಎಲ್ಲಾ ವಿದ್ಯಾರ್ಥಿಗಳ ಹಾಗೂ ಉಪನ್ಯಾಸಕರ ಗಮನಕ್ಕೆ ತಂದು ಸದರಿ ಕರಪತ್ರದಲ್ಲಿ ತಿಳಿಸಿರುವಂತೆ ಆಸಕ್ತ ವಿದ್ಯಾರ್ಥಿಗಳು ಸದರಿ ವಸ್ತುಪ್ರದರ್ಶನ ಸ್ಪರ್ಧೆಯಲ್ಲಿ ಭಾಗವಹಿಸಲು ಅನುಕೂಲಕರವಾಗುವಂತೆ ಅಗತ್ಯ ಕ್ರಮ ಕೈಗೊಳ್ಳಲು ಎಲ್ಲಾ ಸರ್ಕಾರಿ / ಖಾಸಗಿ ಅನುದಾನಿತ ಕಾಲೇಜುಗಳ ಪ್ರಾಂಶುಪಾಲರುಗಳಿಗೆ ಸೂಚಿಸಲಾಗಿದೆ.

ವಿಭಾಗ ಮಟ್ಟದಲ್ಲಿ ಭಾಗವಹಿಸುವ ವಿದ್ಯಾರ್ಥಿಗಳಿಗೆ ಮತ್ತು ಮಾರ್ಗದರ್ಶಿ ಉಪನ್ಯಾಸಕರಿಗೆ ಪರಿಷತ್ತು ಪ್ರಶಸ್ತಿ ಪತ್ರ / ಅಭಿನಂದನಾ ಪತ್ರ, ಊಟ ಮತ್ತು ಕಾಫಿಯ ವ್ಯವಸ್ಥೆಯನ್ನು ಹಾಗೂ ರಾಜ್ಯ ಮಟ್ಟದಲ್ಲಿ ಭಾಗವಹಿಸುವ ವಿದ್ಯಾರ್ಥಿಗಳಿಗೆ ಮತ್ತು ಮಾರ್ಗದರ್ಶಿ ಉಪನ್ಯಾಸಕರಿಗೆ ಮೇಲೆ ತಿಳಿಸಿರುವುದರೊಂದಿಗೆ ವಸತಿ ವ್ಯವಸ್ಥೆಯನ್ನು ಒದಗಿಸುತ್ತದೆ.

**ಕೋವಿಡ್–19ರ ಮಾರ್ಗಸೂಚಿಗಳನ್ನು ಅನುಸರಿಸಿ ಸಾಮಾಜಿಕ ಅಂತರವನ್ನು ಕಾಪಾಡಿಕೊಂಡು ಸ್ಪರ್ಧೆಯಲ್ಲಿ ಭಾಗವಹಿಸಲು ಅಗತ್ಯ ಕ್ರಮಕೈಗೊಳ್ಳಬೇಕೆಂದು ಸೂಚಿಸಲಾಗಿದೆ.**

ಕಾಲೇಜು ಶಿಕ್ಷಣ ಹೆಚ್ಚುವರಿ ನಿರ್ದೇಶಕರು

**ಇವರಿಗೆ:**

1. ರಾಜ್ಯದ ಎಲ್ಲಾ ಸರ್ಕಾರಿ, ಖಾಸಗಿ ಅನುದಾನಿತ ಮತ್ತು ಅನುದಾನರಹಿತ ಕಾಲೇಜುಗಳ ಪ್ರಾಂಶುಪಾಲರುಗಳಿಗೆ – ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
2. ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ, ಕಲಬುರಗಿ – ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
3. ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ಬೆಂಗಳೂರು– ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಸೂಚಿಸಲಾಗಿದೆ.

**ಪ್ರತಿಯನ್ನು:**

1. ಅಧ್ಯಕ್ಷರು, ಕರ್ನಾಟಕ ರಾಜ್ಯ ವಿಜ್ಞಾನ ಪರಿಷತ್ತು, ವಿಜ್ಞಾನ ಭವನ, ನಂ.24/2 & 24/3, 21ನೇ ಮುಖ್ಯರಸ್ತೆ, ಬನಶಂಕರಿ 2ನೇ ಹಂತ, ಬೆಂಗಳೂರು – 560 070.
2. ಕಛೇರಿ ಪ್ರತಿ.